ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಸಾರಿಗೆ ಸಂಸ್ಥೆ ಬಸ್ ಪ್ರಯಾಣ ದರ ಏರಿಕೆ ಬಗ್ಗೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

605 (767) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡೀಸಲ್ ಬೆಲೆ ಏರಿಕೆಯ ಹಿನ್ನೆಲೆಯಲ್ಲಿ ಸಾರಿಗೆ ಸಂಸ್ಥೆ ಪ್ರಯಾಣ ದರವನ್ನು ಏರಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಶೇಕಡ ಎಷ್ಟು ಹೆಚ್ಚು ಮಾಡಲಾಗಿದೆ;

(ಆ) ಸಾರಿಗೆ ಸಂಸ್ಥೆಯ ಟಿಕೆಟ್ ದರವನ್ನು ಹೆಚ್ಚಿಸಲು ಯಾವ ಮಾನದಂಡವನ್ನು ಅನುಸರಿಸಲಾಗುವುದು; ಯಾವ ರೀತಿ ಟಿಕೆಟ್ ದರ ನಿಗಧಿಗೊಳಿಸಲಾಗುವುದು;

(ಇ) ಟಿಕೆಟ್ ದರವನ್ನು ಹೆಚ್ಚಿಸುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುವುದಿಲ್ಲವೇ; ಸೋರಿಕೆ ಮತ್ತು ಅನಾವಶ್ಯಕ ವೆಚ್ಚಗಳನ್ನು ತಡೆಗಟ್ಟಿ ನಷ್ಟವನ್ನು ಸರಿದೂಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ?